ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

5) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ 2010

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು) (ಮಾನ್ಯ ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು :

ಖಂಡ 2 ರಿಂದ 8ರವರೆಗೆ :

ಅಧ್ಯಕ್ಷರು : "ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ : 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಜಗದೀಶ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು) (ಮಾನ್ಯ ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸ ಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : "2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ)ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಇ. ವಿಧೇಯಕಗಳ ಮಂಡನೆ :

1) ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕ 2010

ಮಂಡನೆ ಅನುಮತಿ ಕೋರಿಕೆ

ಶ್ರೀ ಜಗದೀಶ್ ಶೆಟ್ಟರ್(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ನಗರಾಭಿವೃದ್ಧಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) :

ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ನಗರಾಭಿವೃದ್ಧಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ನಗರಾಭಿವೃದ್ಧಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ – ಅನುಬಂಧ–VI

(ಈ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

4) ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ 2010